ಖಂಡ 2 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "ಮೊದಲನೆ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವ ಅಂಗೀಕಾರ

ಶ್ರೀ ಎಸ್.ಎ. ರವೀಂದ್ರನಾಥ್ (ಕೃಷಿ ಸಚಿವರು) : ಮಾನ್ಯ ಅಧ್ಯಕ್ಷರೆ, 2009 ರ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳ ವಿಧೇಯಕವನ್ನು ಪುನರ್ ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "2009ರ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳ ವಿಧೇಯಕವನ್ನು ಪುನರ್ ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಪುನರ್ ಒಪ್ಪಿಗೆ ನೀಡಲಾಯಿತು

II) ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಗಳ ವಿಧೇಯಕ, 2009

ಪುನರ್ ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಇಲಾಖೆ ಸಚಿವರು) (ತೋಟಗಾರಿಕೆ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೆ, 2009ರ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಗಳ ವಿಧೇಯಕವನ್ನು ಪುನರ್ ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು : ಇದರ ಬಗ್ಗೆ ಮಾತನಾಡುತ್ತೀರಾ?

ಶ್ರೀ ಟಿ.ಬಿ.ಜಯಚಂದ್ರ : ಮಾನ್ಯ ಅಧ್ಯಕ್ಷರೆ, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳ ವಿಧೇಯಕಕ್ಕಿಂತ ಈ ವಿಧೇಯಕ ವಿವಾದಾತ್ಮಕವಾಗಿದೆ. ಆದ್ದರಿಂದ ಯಾವ ಕಾರಣಕ್ಕಾಗಿ ಇದನ್ನು ತರಲಾಗಿದೆ ಎಂದು ಮತ್ತು ಇದರಲ್ಲಿ ಏನು ಬದಲಾವಣೆ ಮಾಡಲಾಗಿದೆ ಎಂದು ಹೇಳಿ.

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು) : 27(3) ಮತ್ತು 27(4) ರ ಬಗ್ಗೆ ಈಗ ತಿದ್ದುಪಡಿ ಮಾಡಿರುವುದನ್ನೇ ಅನುಮೋದನೆ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ. ರಾಜ್ಯಪಾಲರು ಈ ಒಂದು ಕಂಡಿಕೆಗೆ ಆಕ್ಷೇಪಣೆ ಮಾಡಿದ್ದರು. ರಾಜ್ಯ ಸರ್ಕಾರ ನಾಮಕರಣ ಮಾಡುವ ಅಧಿಕಾರವನ್ನು ರಾಜ್ಯಪಾಲರು Search Committಗೆ ನೇಮಕ ಮಾಡುವುದಕ್ಕೆ ಅವಕಾಶ ಕೊಡಿ ಎಂದು ಅವರು ಕೇಳಿದ್ದಾರೆ. ಆದರೆ, ನಾವು ಮಾಡಿರುವ ತಿದ್ದುಪಡಿಯ ರೀತಿಯಲ್ಲಿಯೇ ಇರಲೆಂದು ನಾವು ಮತ್ತೊಮ್ಮೆ ಪ್ರಸ್ತಾವನೆಯನ್ನು ಮಾಡುತ್ತಿದ್ದೇವೆ.

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಸಚಿವರು) : ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರು ಯಾವ ಹಿನ್ನೆಲೆಯಲ್ಲಿ ಕಳುಹಿಸಿದ್ದಾರೆಂಬುದರ ಬಗ್ಗೆ ನಾವು ಬಹಿರಂಗವಾಗಿ ಚರ್ಚೆ ಮಾಡುವುದು ಬೇಕಾಗಿಲ್ಲ. ಏಕೆಂದರೆ, ಇದು ಒಳ್ಳೆಯದಾಗುವುದಿಲ್ಲ. ಯಾವ ಹಿನ್ನೆಲೆಯಲ್ಲಿ ಕಳುಹಿಸಿದ್ದಾರೆಂಬುದು ನಿಮಗೂ ಮತ್ತು ಎಲ್ಲರಿಗೂ ಸಹ ಗೊತ್ತಿದೆ. ಸರ್ಕಾರಕ್ಕೆ ಒಂದು ಅಧಿಕಾರವನ್ನು ಇಟ್ಟುಕೊಳ್ಳತಕ್ಕಂಥ ಅವಶ್ಯಕತೆ ಇದೆ. ಆ ದೃಷ್ಟಿಯಿಂದ ಇದನ್ನು ಇಲ್ಲಿ ಪಾಸ್ ಮಾಡಿ ಕಳುಹಿಸುವುದು ಒಳ್ಳೆಯದೆಂದು ನನ್ನ ಅಭಿಪ್ರಾಯವಾಗಿದೆ.

ಶ್ರೀ ಹೆಚ್.ಕೆ.ಕುಮಾರ ಸ್ವಾಮಿ : ಯಾವ ಹಿನ್ನೆಲೆ ಎಂಬುದನ್ನು ಹೇಳಿ.

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಸಚಿವರು) : ಯಾವ ಹಿನ್ನೆಲೆಯಿಂದ ಕಳುಹಿಸಿದ್ದಾರೆಂಬುದು ತಮಗೆ ಗೊತ್ತಿದೆ.

ಅಧ್ಯಕ್ಷರು : "2009ರ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಗಳ ವಿಧೇಯಕವನ್ನು ಪುನರ್ ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 67 ರವರೆಗೆ

ಅಧ್ಯಕ್ಷರು : "ಖಂಡ 2 ರಿಂದ 67 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 67 ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 2 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು
(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವ ಅಂಗೀಕಾರ

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಇಲಾಖೆ ಸಚಿವರು) (ತೋಟಗಾರಿಕೆ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೆ, 2009ರ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಗಳ ವಿಧೇಯಕವನ್ನು ಪುನರ್ ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "2009ರ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಗಳ ವಿಧೇಯಕವನ್ನು ಪುನರ್ ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಪುನರ್ ಒಪ್ಪಿಗೆ ನೀಡಲಾಯಿತು

ಶ್ರೀ ಆರ್.ಅಶೋಕ್ (ಸಾರಿಗೆ ಸಚಿವರು) : ಮಾನ್ಯ ಅಧ್ಯಕ್ಷರೆ, ಅಕ್ರಮ ಸಕ್ರಮಕ್ಕೆ ಸಂಬಂಧಪಟ್ಟಂಥ ಬಿಲ್ ಇದೆ.